**ಕರ್ನಾಟಕ ಸರ್ಕಾರ**
**ಸಾರಿಗೆ ಇಲಾಖೆ**

## ಸಾರ್ವಜನಿಕ ಪ್ರಕಟಣೆ

## ವಾಹನ ಮಾಲೀಕರ ಆದ್ಯ ಗಮನಕ್ಕೆ.

ಕರ್ನಾಟಕ ರಾಜ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ.ಟಿಡಿ 193 ಟಿಡಿಒ 2021, ದಿನಾಂಕ:17-08-2023 ಹಾಗೂ ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ.ಸಾಆ/ನೋಂ-1/ಪಿಆರ್-434/2022-23, ದಿನಾಂಕ:18-08-2023ರ ಪ್ರಕಾರ, ಕರ್ನಾಟಕ ರಾಜ್ಯದಲ್ಲಿ 1ನೇ ಏಪ್ರಿಲ್ 2019 ಕ್ಕಿಂತ ಮೊದಲು ನೋಂದಾಯಿಸಲ್ಪಟ್ಟ ಹಳೆಯ ಎಲ್ಲಾ (ಹಳೆಯ / ಅಸ್ತಿತ್ವದಲ್ಲಿರುವ ವಾಹನಗಳು) (ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳು, ಲಘು ಮೋಟಾರು ವಾಹನಗಳು, ಪ್ರಯಾಣಿಕ ಕಾರುಗಳು, ಮಧ್ಯಮ ಮತ್ತು ಭಾರೀ ವಾಣಿಜ್ಯ ವಾಹನಗಳು, ಟ್ರೈಲರ್, ಟ್ರ್ಯಾಕ್ಟರ್ ಇತ್ಯಾದಿ) ವಾಹನಗಳಿಗೆ ಅತಿ ಸುರಕ್ಷಿತ ನೋಂದಣಿ ಫಲಕಗಳನ್ನು (ಹೆಚ್ಎಸ್ಆರ್‌ಪಿ) ಅಳವಡಿಸುವುದು ಕಡ್ಡಾಯವಾಗಿದೆ.

### ಹಳೆಯ ವಾಹನಗಳ ಮೇಲೆ ಹೆಚ್.ಎಸ್.ಆರ್.ಪಿ. ಅಳವಡಿಕೆಯ ಕಾರ್ಯವಿಧಾನ

1. https://transport.karnataka.gov.in ಅಥವಾ www.siam.in ಗೆ ಭೇಟಿ ನೀಡಿ ಮತ್ತು Book HSRP ನ್ನು ಕ್ಲಿಕ್ ಮಾಡಿ.
2. ನಿಮ್ಮ ವಾಹನ ತಯಾರಕರನ್ನು ಆಯ್ಕೆಮಾಡಿ.
3. ವಾಹನದ ಮೂಲ ವಿವರಗಳನ್ನು ಭರ್ತಿ ಮಾಡಿ.
4. HSRP ಅಳವಡಿಕೆಗಾಗಿ ನಿಮ್ಮ ಅನುಕೂಲಕ್ಕೆ ತಕ್ಕಂತೆ ಡೀಲರ್ ಸ್ಥಳವನ್ನು ಆಯ್ಕೆಮಾಡಿ.
5. HSRP ಶುಲ್ಕವನ್ನು ಆನ್‌ಲೈನ್‌ನಲ್ಲಿ ಪಾವತಿಸಿ. ಶುಲ್ಕ ಪಾವತಿಯನ್ನು ನಗದು ರೂಪದಲ್ಲಿ ಮಾಡುವಂತಿಲ್ಲ.
6. ವಾಹನ ಮಾಲೀಕರ ಮೊಬೈಲ್ ಸಂಖ್ಯೆಗೆ ಒ.ಟಿ.ಪಿ. ರವಾನಿಸಲಾಗುವುದು.
7. ನಿಮ್ಮ ಅನುಕೂಲಕ್ಕೆ ತಕ್ಕಂತೆ HSRP ಅಳವಡಿಕೆಯ ದಿನಾಂಕ ಮತ್ತು ಸಮಯವನ್ನು ಆಯ್ಕೆಮಾಡಿ.
8. ನಿಮ್ಮ ವಾಹನದ ಯಾವುದೇ ತಯಾರಕ/ಡೀಲರ್ ಸಂಸ್ಥೆಗೆ ಭೇಟಿ ನೀಡಿ.
9. ವಾಹನ ಮಾಲೀಕರ ಕಚೇರಿ ಆವರಣ / ಮನೆಯ ಸ್ಥಳದಲ್ಲಿ HSRP ಅಳವಡಿಕೆಗಾಗಿ ಆಯ್ಕೆ ಮಾಡಬಹುದು.

### ಪ್ರಮುಖ ಅಂಶಗಳು

1. https://transport.karnataka.gov.in ಅಥವಾ www.siam.in ಮೂಲಕ ಮಾತ್ರ HSRP ಅಳವಡಿಕೆಗೆ ಕಾಯ್ದಿರಿಸಿಕೊಳ್ಳಿ.
2. ಯಾವುದೇ ತೆರೆದ ಮಾರುಕಟ್ಟೆಯ ರಸ್ತೆ ಬದಿಯ ಮಾರಾಟಗಾರರಿಂದ ನಕಲಿ ಹೊಲೊಗ್ರಾಮ್ / IND ಮಾರ್ಕ್/ಇಂಡಿಯಾ ಎಂದು ಕೆತ್ತಲಾದ ಅಥವಾ ಕೆತ್ತಿದಂತಹ ಅನುಕರಣೆಯ HSRP / ಒಂದೇ ರೀತಿಯ ಪ್ಲೇಟ್‌ಗಳು/ಸ್ಮಾರ್ಟ್ ನಂಬರ್ ಪ್ಲೇಟ್‌ಗಳನ್ನು ಅಳವಡಿಸುವಂತಿಲ್ಲ. ಅವುಗಳು HSRP ಫಲಕ ಗಳಾಗಿರುವುದಿಲ್ಲ.
3. HSRP ಅಳವಡಿಸದ ಹೊರತು, ವಾಹನ ಮಾಲೀಕತ್ವ ವರ್ಗಾವಣೆ, ವಿಳಾಸ ಬದಲಾವಣೆ, ಕಂತು ಕರಾರು ನಮೂದು/ರದ್ದತಿ, ಅರ್ಹತಾಪತ್ರ ನವೀಕರಣ ಇತ್ಯಾದಿ ಯಾವುದೇ ಸೇವೆಗಳನ್ನು ಅನುಮತಿಸುವುದಿಲ್ಲ.
4. ಶುಲ್ಕ ಪಾವತಿಸಿರುವ ಪ್ರಕರಣದಲ್ಲಿ HSRP ಅಳವಡಿಕೆಗೆ ನಿಗದಿತ ದಿನಾಂಕದಿಂದ 30 ದಿನಗಳವರೆಗೆ ಮಾನ್ಯವಾದ ಎಚ್‌ಎಸ್‌ಆರ್‌ಪಿ ರಸೀದಿಯನ್ನು ಪ್ರಸ್ತುತಪಡಿಸುವ ವಾಹನಗಳಿಗೆ ಯಾವುದೇ ದಂಡವಿಲ್ಲ.

HSRP ಅಳವಡಿಕೆಗೆ **ದಿನಾಂಕ:17-11-2023ರವರೆಗೆ** ನೀಡಲಾಗಿದ್ದ ಕಾಲಾವಕಾಶವನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ.ಟಿಡಿ 193 ಟಿಡಿಒ 2021, ದಿನಾಂಕ:16-11-2023ರಲ್ಲಿ **ದಿನಾಂಕ:17-02-2024** ರವರೆಗೆ ವಿಸ್ತರಿಸಲಾಗಿರುತ್ತದೆ.

ಸಾರ್ವಜನಿಕರು ಆನ್ ಲೈನ್ ಮೂಲಕ ಹೆಚ್.ಎಸ್.ಆರ್.ಪಿ. ಪಡೆಯಲು ತೊಂದರೆಗಳಾದಲ್ಲಿ ಕೆಳಕಂಡ ದೂರವಾಣಿ ಸಂಖ್ಯೆಗಳ ಮೂಲಕ ಸಹಾಯವಾಣಿಯನ್ನು (helpline) ಕಛೇರಿ ಕಾರ್ಯದ ಸಮಯ ಬೆಳಿಗ್ಗೆ 10 ರಿಂದ ಸಂಜೆ 5.30 ರವರೆಗೆ ಸಂಪರ್ಕಿಸಬಹುದಾಗಿದೆ.

1) 94498 63429
2) 94498 63426

***